# ಕೃಷಿ ವಿಶ್ವ ವಿದ್ಯಾನಿಲಯ
## ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065

* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 01.07.2022

## ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ
### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
### (ದಿನಾಂಕ 02–07–2022 ರಿಂದ 06–07–2022 ವರೆಗೆ)

| ನಿಯತಾಂಕಗಳು | 02.7.2022 | 03.7.2022 | 04.7.2022 | 05.7.2022 | 06.7.2022 |
|---|---|---|---|---|---|
| ಮಳೆ (ಮಿ ಮಿ) | 11 | 12 | 14 | 12 | 11 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 28 | 28 | 28 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 20 | 20 | 20 |
| ಮೋಡ ( ಪ್ರಮಾಣ) | 7 | 7 | 7 | 7 | 7 |
| ಅರ್ದ್ರತೆ 7.20 ಬೆ (ಶೇ) | 91 | 91 | 93 | 93 | 93 |
| ಅರ್ದ್ರತೆ 2.20 ಮ (ಶೇ) | 81 | 81 | 83 | 83 | 83 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 6 | 6 | 5 | 6 |
| ಗಾಳಿಯ ದಿಕ್ಕು ( ಡಿಗ್ರಿ) | 292 | 291 | 288 | 288 | 283 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0$^{o}$ C** ಮತ್ತು ಕನಿಷ್ಠ **20.0$^{o}$ C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **91-93 %** ಇದ್ದು ಮಧ್ಯಾಹ್ನ **81-83 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **5–6** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

- ಆರಿದ್ರಾ ನಕ್ಷತ್ರದ ಮಳೆಯ ಕಾಲವು ಜೂನ್ ತಿಂಗಳ 22 ರಿಂದ ಜುಲೈ 05 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 20.0 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. ಮುಂಬರುವ ಬಿತ್ತನೆಗೆ ಅಗತ್ಯವಿರುವ ಬಿತ್ತನೆ ಬೀಜಮಾದರಿ೦ಯನ್ನು ಬೀಜಪರೀಕ್ಷಾಲ೦ಯಕ್ಕೆ ಕಳುಹಿಸುವ ಮೂಲಕ ಮೊಳಕೆ ಪ್ರಮಾಣದ ಸಾಮರ್ಥ್ಯ ತಿಳಿದುಕೊಳ್ಳುವುದು.<br>2. ಉತ್ತಮ ಮಳೆಯ ಅವಕಾಶ ಇರುವುದರಿಂದ ಬದುಗಳ ಸುತ್ತಲು ಮೇವಿನ ಹುಲ್ಲಿನ ಬೀಜಗಳನ್ನು ಬಿತ್ತನೆ ಮಾಡಿ ಇದರಿಂದ ಬದುಗಳು ಭದ್ರವಾಗಿರುತ್ತವೆ ಮತ್ತು ಜಮೀನುಗಳಲ್ಲಿ ನೀರಿನ ತೇವಾಂಶವನ್ನು ಕಾಪಾಡುತ್ತದೆ.<br>3. ಮಳೆಯ ಏರುಪೇರಿಗೆ ಸುಸ್ಥಿರ ಆದಾಯಕೋಸ್ಕರ ಜಮೀನಿನ ಬದುಗಳ ಮೇಲೆ ಹೆಬ್ಬೇವು, ಸಿಲ್ವರ್ ಓಕ್ ಮತ್ತು ಸರ್ವೆ ಮರಗಳನ್ನು ನೆಡುವುದು ಸೂಕ್ತ.ಮಳೆಯ ಏರುಪೇರಿಗೆ ಸುಸ್ಥಿರ ಆದಾಯಕೋಸ್ಕರ ಜಮೀನಿನ ಬದುಗಳ ಮೇಲೆ/ಸುತ್ತಲು ಮಾವು(ಮಲ್ಲಿಕ ಮತ್ತು ಬಾದಾಮಿ ಕಸಿ ಗಿಡ) ಬೆಳೆಯುವುದು ಸೂಕ್ತ. |

| | | |
|---|---|---|
| ಮುಂಗಾರು ಬೆಳೆಗಳು | ಬಿತ್ತನೆ, ಮೊಳಕೆ ಮತ್ತು ಬೆಳವಣಿಗೆ ಹಂತ | **ಏಕಬೆಳೆ ಪದ್ಧತಿಯಲ್ಲಿ ಈ ಕೆಳಗಿನ ದೀರ್ಘಾವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ತೊಗರಿ : ಟಿ.ಟಿ.ಬಿ–7, ಬಿ.ಆರ್.ಜಿ–1,2,4ಮತ್ತು 5<br>ಹರಳು: ಡಿ.ಸಿ.ಎಸ್–9 (ಜ್ಯೋತಿ), ಡಿ.ಸಿ.ಎಚ್–177 ಮತ್ತು 32<br>ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಎ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ.<br>**ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ನೆಲಗಡಲೆ: ಟಿ.ಎಂ.ವಿ–2, ಜೆ.ಎಲ್–24 ಮತ್ತು ಕೆ.ಸಿ.ಜಿ–6<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1<br>ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ<br>ತೊಗರಿ ಬಿತ್ತನೆಗೆ ಮುಂಚೆ ಬೀಜೋಪಚಾರ ಮಾಡುವುದು ಉತ್ತಮ, ಕಾರ್ಬೆನ್‌ಡೈಜಿಮ್ ಅಥವಾ ಥೈರಾಮ್ @ 2 ಗ್ರಾಂ/ ಪ್ರತಿ ಕೆ.ಜಿ ಬೀಜಕ್ಕೆ ಉಪಚರಿಸಿ, ಮತ್ತು ಜೈವಿಕ ಕೀಟನಾಶಕಗಳಾದ ಟ್ರೈಕೋಡರ್ಮ ವಿರಿಡೆ @ 4 ಗ್ರಾಂ/ ಪ್ರತಿ ಕೆ.ಜಿ ಬೀಜಕ್ಕೆ ಅಥವಾ ಸುಡೋಮೋನಾಸ್ ಫ್ಲುರೆಸೆನ್ಸ್ @ 10 ಗ್ರಾಂ/ ಪ್ರತಿ ಕೆ.ಜಿ ಬೀಜಕ್ಕೆ ಮತ್ತು ರೈಜೋಬಿಯಂ @ 10 ಗ್ರಾಂ/ ಪ್ರತಿ ಕೆ.ಜಿ ಬೀಜಕ್ಕೆ ಬೆರೆಸಿ ಉಪಚರಿಸಿ.<br>1. ಎಲ್ಲೆಲ್ಲಿ ದೀರ್ಘಾವದಿ ಬೆಳೆಗಳು ( ತೊಗರಿ ಮತ್ತು ಹರಳು) ಬಿತ್ತನೆ ಮಾಡಿದಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>2. ಎಲ್ಲೆಲ್ಲಿ ಶಿಫಾರಿಸಿಗಿಂತ ಹೆಚ್ಚು ಗಿಡಗಳ ಸಂಖ್ಯೆ ಇದೆಯೋ ಅಲ್ಲಿ ಬೆಳೆ ಸಸಿಗಳ ಸಂಖ್ಯೆಯನ್ನು ಕಡಿಮೆಗೊಳಿಸುವುದರಿಂದ ಮಣ್ಣಿನ ತೇವಾಂಶದ ಸದ್ಬಳಕೆ ಮಾಡಿಕೊಳ್ಳಬಹುದು. |
| ಮಾವು | | 1. ಮಾವಿನಲ್ಲಿ ಒತ್ತಾಗಿ ಬೆಳೆದಿರುವ ರೆಂಬೆಗಳನ್ನು ಕತ್ತರಿಸಬೇಕು ಇದರಿಂದ ಸೂರ್ಯನ ಬೆಳಕು ಒಳಬಾಗಕ್ಕೆ ಬೀಳುತ್ತದೆ ಇದರಿಂದ ಒಳಭಾಗದಲ್ಲೂ ಮುಂದಿನ ಬಾರಿ ಹೂ ಮತ್ತು ಕಾಯಿ ಕಚ್ಚುತ್ತವೆ.<br>2. ಗಿಡಗಳ ಸುತ್ತಲು ಪಾತಿ ಮಾಡಿ, ಶಿಫಾರಸ್ಸು ಮಾಡಿದ ಗೊಬ್ಬರಗಳನ್ನು ಮಳೆಗಾಲ(ಜೂನ್–ಜುಲೈ) ದಲ್ಲಿ ಒದಗಿಸಬೇಕು.<br>3. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |
| **ಹೈನುಗಾರಿಕೆ** | | |
| **ಪಶುಸಂಗೋಪನೆ** | | 1. **ಗಂಟಲು ಬೇನೆ:** ಪ್ರತಿ ವರ್ಷವೂ ಈ ರೋಗ ಮುಂಗಾರು ಮಳೆ ಪ್ರಾರಂಭದಲ್ಲಿ ( ಜೂನ್ ಮತ್ತು ಜುಲೈ) ಉಲ್ಬಣವಾಗುವುದರಿಂದ ಗಂಟಲು ಬೇನೆ ಲಸಿಕೆಯನ್ನು ಮೇ ತಿಂಗಳಿನಲ್ಲಿ ಮಾಡಿಸುವುದು.<br>2. **ಚಪ್ಪೆ ರೋಗ :** ಈ ರೋಗವು ಬ್ಯಾಕ್ಟೀರಿಯಾದಿಂದ ಹರಡುತ್ತದೆ. ಈ ರೋಗವು ದನ, ಎಮ್ಮೆ, ಕುರಿಗಳಲ್ಲಿ ಹರಡುತ್ತದೆ. ಸಾಮಾನ್ಯವಾಗಿ ಈ ರೊಗವು ಮಳೆಗಾಲದ ಕೊನೆಯಲ್ಲಿ ಕಾಣುತ್ತದೆ. ಚಪ್ಪೆ ರೋಗದ ಲಸಿಕೆಯನ್ನು ಪ್ರತಿ ವರ್ಷವೂ ಜೂನ್/ಜುಲೈ ತಿಂಗಳಲ್ಲಿ ಮಾಡಿಸುವುದು. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮುನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.